# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| **ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ** | **1008** |
| **ಮಾನ್ಯ ಸದಸ್ಯರ ಹೆಸರು** | **ಶ್ರೀ ಸಲೀಂ ಅಹಮದ್** |
| **ಉತ್ತರಿಸಬೇಕಾದ ದಿನಾಂಕ** | **24.02.2023** |
| **ಉತ್ತರಿಸುವ ಸಚಿವರು** | **ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖಾ ಸಚಿವರು.** |

| ಪ್ರ ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ರಾಜ್ಯದ ಹಿಂದುಳಿದ ವರ್ಗಗಳ ಅಭಿವೃದ್ಧಿ ಇಲಾಖೆ ವ್ಯಾಪ್ತಿಯಲ್ಲಿರುವ ದೇವರಾಜ್ ಅರಸು ವಿದ್ಯಾರ್ಥಿ ನಿಲಯಗಳ ಸಂಖ್ಯೆ ಎಷ್ಟು; ವಿದ್ಯಾರ್ಥಿಗಳ ಸಂಖ್ಯೆಗೆ ಅನುಗುಣವಾಗಿ ನಿಲಯಗಳನ್ನು ಸ್ಥಾಪಿಸಲಾಗಿದೆಯೇ ; | ರಾಜ್ಯದಲ್ಲಿ ಹಿಂದುಳಿದ ವರ್ಗಗಳ ಒಟ್ಟು 2438 ವಿದ್ಯಾರ್ಥಿ ನಿಲಯಗಳು ಕಾರ್ಯ ನಿರ್ವಹಿಸುತ್ತಿರುತ್ತವೆ.<br><br>ವಿದ್ಯಾರ್ಥಿಗಳ ಸಂಖ್ಯೆಗೆ ಅನುಗುಣವಾಗಿ ವಿದ್ಯಾರ್ಥಿ ನಿಲಯಗಳ ಸ್ಥಾಪನೆಯು ರಾಜ್ಯದ ಒಟ್ಟಾರೆ ಬೇಡಿಕೆ ಹಾಗೂ ಅನುದಾನದ ಲಭ್ಯತೆಯನ್ನು ಆಧರಿಸಿರುತ್ತದೆ. |
| ಆ) | ವಿದ್ಯಾರ್ಥಿ ನಿಲಯಗಳಲ್ಲಿ ಪ್ರಸ್ತುತ ಇರುವ ವಾರ್ಡನ್ ಸಿಬ್ಬಂದಿಗಳ ಸಂಖ್ಯೆ ಎಷ್ಟು; ಈ ವಿದ್ಯಾರ್ಥಿ ನಿಲಯಗಳು ಮತ್ತು ವಿದ್ಯಾರ್ಥಿಗಳಿಗೆ ಅನುಗುಣವಾಗಿ ವಾರ್ಡನ್‌ಗಳು ಇಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; | ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಲ್ಲಿ ಒಟ್ಟು 2438 ಮೆಟ್ರಿಕ್ ಪೂರ್ವ / ಮೆಟ್ರಿಕ್ ನಂತರ ಬಾಲಕ / ಬಾಲಕಿಯರ ವಿದ್ಯಾರ್ಥಿ ನಿಲಯಗಳು ಕಾರ್ಯನಿರ್ವಹಿಸುತ್ತಿದ್ದು, ಸದರಿ ಎಲ್ಲಾ 2438 ನಿಲಯಗಳಿಗೆ ನಿಲಯ ಪಾಲಕರು / ನಿಲಯ ಮೇಲ್ವಿಚಾರಕರ ಹುದ್ದೆಗಳು ಮಂಜೂರಾಗಿರುತ್ತದೆ. ಈ ಪೈಕಿ 1160 ನಿಲಯ ಮೇಲ್ವಿಚಾರಕರ ಹುದ್ದೆಗಳು ಭರ್ತಿಯಾಗಿದ್ದು, 1278 ಹುದ್ದೆಗಳು ಖಾಲಿ ಇರುತ್ತವೆ |
| ಇ) | ವಿದ್ಯಾರ್ಥಿಗಳ ದಿನನಿತ್ಯದ ಶೈಕ್ಷಣಿಕ ಚಟುವಟಿಕೆಗಳಲ್ಲಿ ಮಹತ್ತರವಾದ ಪಾತ್ರವನ್ನು ವಹಿಸಲು ಈ ವಾರ್ಡನ್‌ಗಳ ಕೊರತೆಯಿಂದ ವಿದ್ಯಾರ್ಥಿಗಳು ಶೈಕ್ಷಣಿಕವಾಗಿ ಹಿಂದುಳಿಯುವ ಸಾಧ್ಯತೆಗಳಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಕೊರತೆ ಇರುವ ವಾರ್ಡನ್‌ಗಳನ್ನು ಹೊಸದಾಗಿ ನೇಮಿಸಿಕೊಳ್ಳಲು ಸರ್ಕಾರದ ಕ್ರಮವೇನು ? | ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಗೆ ಮಂಜೂರಾಗಿರುವ 2438 ನಿಲಯ ಪಾಲಕರು / ನಿಲಯ ಮೇಲ್ವಿಚಾರಕರ ಹುದ್ದೆಗಳ ಪೈಕಿ ಹಾಲಿ 1160 ಹುದ್ದೆಗಳು ಭರ್ತಿಯಾಗಿದ್ದು, ಖಾಲಿ ಇರುವ ವಿದ್ಯಾರ್ಥಿ ನಿಲಯಗಳಿಗೆ ಸಮೀಪದಲ್ಲಿರುವ ವಿದ್ಯಾರ್ಥಿ ನಿಲಯಗಳ ನಿಲಯ ಮೇಲ್ವಿಚಾರಕರಿಗೆ ಹಾಗೂ ಕಿರಿಯ ನಿಲಯ ಮೇಲ್ವಿಚಾರಕರುಗಳಿಗೆ ವಿದ್ಯಾರ್ಥಿ ನಿಲಯಗಳ ಸಮರ್ಪಕ ನಿರ್ವಹಣೆ ಹಿತದೃಷ್ಟಿಯಿಂದ ಹೆಚ್ಚುವರಿಯಾಗಿ ಜಿಲ್ಲಾ ಹಂತದಲ್ಲಿ ಪ್ರಭಾರವನ್ನು ವಹಿಸಲಾಗಿರುತ್ತದೆ.<br>2017 ರಲ್ಲಿ 1028 ಹುದ್ದೆಗಳ ಭರ್ತಿಗೆ ಪ್ರಸ್ತಾವನೆ ಸಲ್ಲಿಸಿದ್ದು, ಈ ಪೈಕಿ 440 ಹುದ್ದೆಗಳ ಭರ್ತಿಗೆ ಆರ್ಥಿಕ ಇಲಾಖೆಯಿಂದ ಅನುಮತಿ ನೀಡಿದ್ದು, ಅದರಂತೆ ಕೆಪಿಎಸ್ ಸಿ ಯಿಂದ 392 ಅಭ್ಯರ್ಥಿಗಳ ಅಂತಿಮ ಆಯ್ಕೆ ಪಟ್ಟಿಯನ್ನು ಅಕ್ಟೋಬರ್ 2021 ಹಾಗೂ ಫೆಬ್ರುವರಿ 2022 ರಲ್ಲಿ ನೀಡಿದ್ದು, ಈ ಪೈಕಿ ಎಲ್ಲಾ ದಾಖಲಾತಿ ಸಲ್ಲಿಸಿದ 202 ಅಭ್ಯರ್ಥಿಗಳಿಗೆ ನೇಮಕಾತಿ ಆದೇಶ ನೀಡಲಾಗಿರುತ್ತದೆ. ಬಾಕಿ ಉಳಿದಿರುವ 248 ಹುದ್ದೆಗಳಿಗೆ ಅರ್ಹ ಅಭ್ಯರ್ಥಿಗಳ ಆಯ್ಕೆ ಪಟ್ಟಿಯನ್ನು ಕಳುಹಿಸಲು ಕೆಪಿಎಸ್‌ಸಿ ಗೆ ಪ್ರಸ್ತಾವನೆಯನ್ನು ಸಲ್ಲಿಸಲಾಗಿದೆ. |

**ಸಂಖ್ಯೆ:ಹಿಂವಕ 78 ಬಿಇಟಿ 2023**

**(ಕೋಟ ಶ್ರೀನಿವಾಸ ಪೂಜಾರಿ)**
**ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ**
**ಕಲ್ಯಾಣ ಇಲಾಖಾ ಸಚಿವರು**